# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – **560 002**

ಸಂಖ್ಯೆ: BBMP/Addl.Dir/JD North/0028/2014-15 ದಿನಾಂಕ: 06–09–2019.

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 34, ಮಿಲ್ಲರ್ ರಸ್ತೆ, ಜಯಮಹಲ್, ವಾರ್ಡ್ ನಂ. 92, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 12–06–2017.

2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/0028/2014-15, ದಿನಾಂಕ: 15–06–2015.

* * * * * * *

ಆಸ್ತಿ ಸಂಖ್ಯೆ. 34, ಮಿಲ್ಲರ್ ರಸ್ತೆ, ಜಯಮಹಲ್, ವಾರ್ಡ್ ನಂ. 92, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ತಳ + ನೆಲ + ಮೇಲಿನ 4 ಅಂತಸ್ತುಗಳ 09 ಘಟಕಗಳುಳ್ಳ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 15–06–2015 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ದಿನಾಂಕ: 13–06–2019 ರಂದು ಪರಿಶೀಲಿಸಲಾಗಿದ್ದು, ಮಂಜೂರಾತಿ ನಕ್ಷೆಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ಕಾಮಗಾರಿಯು ಪ್ರಗತಿಯಲ್ಲಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 26–07–2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ಹಾಗೂ ಪ್ರಾರಂಭಿಕ ಪ್ರಮಾಣಪತ್ರ ಪಡೆಯದೇ ನಿರ್ಮಿಸಿರುವ ಭಾಗಕ್ಕೆ ದಂಡ ಶುಲ್ಕ ಸೇರಿ ಒಟ್ಟು **ರೂ. 4,41,000/–** ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000262 ದಿನಾಂಕ: 22–08–2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ/-
ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

ಶ್ರೀ ಶಾರೂಖ್ ಆಲಿ ಖಾನ್ ರವರು
ಆಸ್ತಿ ಸಂಖ್ಯೆ. 34, ಮಿಲ್ಲರ್ ರಸ್ತೆ, ಜಯಮಹಲ್,
ವಾರ್ಡ್ ನಂ. 92,
ಬೆಂಗಳೂರು

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ವಸಂತನಗರ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

06/09/2019
ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

06/9/2019 06/09/2019 6/9/19